# All India Radio: Bangalore
# National Bulletin In Kannada
# 26.05.2026 19.35 hrs
# ಆಕಾಶವಾಣಿ, ಬೆಂಗಳೂರು
# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಅಸ್ವಾಭಾವಿಕ ಜನಸಂಖ್ಯಾ ಸ್ವರೂಪದ ಸವಾಲು ಪರಿಹರಿಸಲು ಕೇಂದ್ರದಿಂದ ಉನ್ನತ ಮಟ್ಟದ ಸಮಿತಿ ರಚನೆ

೨. ಮುಕ್ತ ಇಂಡೋ-ಪೆಸಿಫಿಕ್ ವಲಯಕ್ಕೆ ಸಂಪೂರ್ಣ ಬದ್ಧತೆ ವ್ಯಕ್ತಪಡಿಸಿದ ಕ್ವಾಡ್ ರಾಷ್ಟ್ರಗಳು

೩. ಕಳ್ಳಸಾಗಣೆ ತಡೆಗೆ ಗಡಿಗಳಲ್ಲಿ ಡ್ರೋನ್ ವಿರೋಧಿ ವ್ಯವಸ್ಥೆ ಅಳವಡಿಕೆ - ಕೇಂದ್ರ ಗೃಹ ಸಚಿವ ಅಮಿತ್ ಶಾ

೪. ಐಪಿಎಲ್ ಟಿ-೨೦ ಕ್ರಿಕೆಟ್: ಮೊದಲನೇ ಕ್ವಾಲಿಫೈಯರ್ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿದ ಗುಜರಾತ್ ಟೈಟಾನ್ಸ್

---

ಒಳನುಸುಳುವಿಕೆ ಮತ್ತು ಇತರ ಕಾರಣಗಳಿಂದ ಉಂಟಾಗುವ ಅಸ್ವಾಭಾವಿಕ ಜನಸಂಖ್ಯಾ ಸ್ವರೂಪದ ಸವಾಲುಗಳನ್ನು ಪರಿಹರಿಸಲು ಕೇಂದ್ರ ಸರ್ಕಾರ, ಉನ್ನತ ಮಟ್ಟದ ಸಮಿತಿಯನ್ನು ರಚಿಸಿದೆ.

ಈ ಸಮಿತಿಯ ಅಧ್ಯಕ್ಷತೆಯನ್ನು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪ್ರಕಾಶ್ ಪ್ರಭಾಕರ್ ನವೋಲೇಕರ್ ವಹಿಸಲಿದ್ದಾರೆ. ನಿವೃತ್ತ ಐಎಎಸ್ ಅಧಿಕಾರಿ ದುರ್ಗಾ ಶಂಕರ್ ಮಿಶ್ರಾ, ನಿವೃತ್ತ ಐಪಿಎಸ್ ಅಧಿಕಾರಿ ಬಾಲಾಜಿ ಶ್ರೀವಾಸ್ತವ ಮತ್ತು ಅರ್ಥಶಾಸ್ತ್ರಜ್ಞ ಡಾ. ಶಮಿಕಾ ರವಿ ಅವರನ್ನು ಸಮಿತಿಯ ಸದಸ್ಯರನ್ನಾಗಿ ನೇಮಿಸಲಾಗಿದೆ. ಕೇಂದ್ರ ಗೃಹ ಸಚಿವಾಲಯದ ಜಂಟಿ ಕಾರ್ಯದರ್ಶಿ, ಸಮಿತಿಯಲ್ಲಿ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

ಒಳನುಸುಳುವಿಕೆ ಮತ್ತು ಇತರ ಕಾರಣಗಳು ಅಸ್ವಾಭಾವಿಕ ಜನಸಂಖ್ಯಾ ಸ್ವರೂಪದ ಬದಲಾವಣೆಗೆ ಕಾರಣವಾಗುತ್ತಿದ್ದು, ಇದು ಯಾವುದೇ ರಾಷ್ಟ್ರದ ವರ್ತಮಾನ ಮತ್ತು ಭವಿಷ್ಯಕ್ಕೆ ಬಹಳ ಮಹತ್ವದ ಸವಾಲನ್ನು ಒಡ್ಡುತ್ತವೆ ಎಂದು ಸಚಿವ ಅಮಿತ್ ಶಾ ಅಭಿಪ್ರಾಯಪಟ್ಟರು.

---

ದೆಹಲಿಯಲ್ಲಿಂದು ನಡೆದ ಕ್ವಾಡ್ ವಿದೇಶಾಂಗ ಸಚಿವರ ಸಭೆಯು, ಮುಕ್ತ ಇಂಡೋ-ಪೆಸಿಫಿಕ್ ವಲಯಕ್ಕೆ ಸಂಪೂರ್ಣ ಬದ್ಧತೆಯನ್ನು ವ್ಯಕ್ತಪಡಿಸಿದ್ದು, ಹಲವು ಪ್ರಮುಖ ವಿಚಾರಗಳ ಕುರಿತು ನಡೆಸಲಾದ ಮಾತುಕತೆ ಫಲಪ್ರದವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ದೆಹಲಿಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಅಮೆರಿಕ ಮತ್ತು ಕೆನಡಾ ವಿಭಾಗದ ಹೆಚ್ಚುವರಿ ಕಾರ್ಯದರ್ಶಿ ನಾಗರಾಜ ನಾಯ್ಡು ಮಾತನಾಡಿ, ಕ್ವಾಡ್ - ಪ್ರಾಯೋಗಿಕ ಮತ್ತು ಕ್ರಿಯಾಶೀಲ ವೇದಿಕೆಯಾಗಿದ್ದು, ನಿರ್ದಿಷ್ಟ ಲಾಭಗಳನ್ನು ನೀಡುತ್ತಿದೆ ಎಂದು ಹೇಳಿದರು. ಸಮುದ್ರ ಮತ್ತು ಬಹುರಾಷ್ಟ್ರೀಯ ಸುರಕ್ಷತೆ, ಆರ್ಥಿಕ ಅಭಿವೃದ್ಧಿ, ನಿರ್ಣಾಯಕ ಮತ್ತು ಆಧುನಿಕ ತಂತ್ರಜ್ಞಾನ ಹಾಗೂ ಮಾನವೀಯ ನೆರವು ಮತ್ತು ವಿಪತ್ತು ನಿರ್ವಹಣೆಯ ವಿಚಾರಗಳು, ಕ್ವಾಡ್ ರಾಷ್ಟ್ರಗಳ ನಡುವಿನ ಸಹಕಾರದ ಪ್ರಮುಖ ಆಧಾರ ಸ್ತಂಭಗಳಾಗಿವೆ. ಇವುಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಹಲವು ಉಪಕ್ರಮಗಳನ್ನು ಪ್ರಕಟಿಸಲಾಗಿದೆ ಎಂದು ಅವರು ತಿಳಿಸಿದರು.

---

ಪ್ರಧಾನ ಮಂತ್ರಿಗಳ ವೈ-ಫೈ ಆಕ್ಸೆಸ್ ನೆಟ್‌ವರ್ಕ್ ಇಂಟರ್ಫೇಸ್- PM-WANI ಅಡಿಯಲ್ಲಿ ದೂರಸಂಪರ್ಕ ಇಲಾಖೆ ಬಳಕೆದಾರ ಸ್ನೇಹಿ ಸುಧಾರಣೆಗಳ ಸರಣಿಯನ್ನು ಪರಿಚಯಿಸಿದೆ.

ಹೊಸ ಕ್ರಮಗಳಲ್ಲಿ ಲ್ಯಾಪ್‌ಟಾಪ್‌ಗಳು ಮತ್ತು ಇತರ ಸಾಧನಗಳಿಗೆ QR -ಆಧಾರಿತ ದೃಢೀಕರಣ, ಅಲ್ಪಾವಧಿಯ ವೈ-ಫೈ ಯೋಜನೆಗಳ ಪರಿಚಯ ಮತ್ತು ಸುಲಭ ಗುರುತಿಸುವಿಕೆ ಹಾಗೂ ವರ್ಧಿತ ವಿಶ್ವಾಸಾರ್ಹತೆಗಾಗಿ PM-WANI ಹಾಟ್‌ಸ್ಪಾಟ್ ಹೆಸರುಗಳ ಪ್ರಮಾಣೀಕರಣ ಸೇರಿವೆ.

ಈ ವರ್ಷದ ಜುಲೈ ವೇಳೆಗೆ ವ್ಯವಸ್ಥೆಯಾದ್ಯಂತ ಬಳಕೆದಾರ ಸ್ನೇಹಿ ವೈಶಿಷ್ಟ್ಯಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಜಾರಿಗೆ ತರಲು ಎಲ್ಲಾ PM-WANI ಪಾಲುದಾರರಿಗೆ ನಿರ್ದೇಶನ ನೀಡಲಾಗಿದೆ ಎಂದು ಕೇಂದ್ರ ಸಂವಹನ ಸಚಿವಾಲಯ ತಿಳಿಸಿದೆ.

ಈ ಸುಧಾರಣೆಗಳು ಪ್ರತಿಯೊಬ್ಬ ನಾಗರಿಕರಿಗೂ ಪ್ರವೇಶಿಸಬಹುದಾದ ಮತ್ತು ಕೈಗೆಟುಕುವ ಡಿಜಿಟಲ್ ಸಂಪರ್ಕವಾಗಿ ಪರಿವರ್ತಿಸುವ ಸರ್ಕಾರದ ನಿರಂತರ ಪ್ರಯತ್ನಗಳ ಭಾಗವಾಗಿದೆ.

---

ಡ್ರೋನ್‌ಗಳ ಮೂಲಕ ಮಾದಕ ದ್ರವ್ಯ ಮತ್ತು ಶಸ್ತ್ರಾಸ್ತ್ರಗಳ ಕಳ್ಳಸಾಗಣೆ ತಡೆಯಲು ಮುಂದಿನ ಆರು ತಿಂಗಳೊಳಗೆ ಗಡಿಗಳಲ್ಲಿ ಡ್ರೋನ್ ವಿರೋಧಿ ವ್ಯವಸ್ಥೆ ಅಳವಡಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

ರಾಜಸ್ಥಾನದ ಬಿಕಾನೇರ್ ಬಳಿ ಬಿಎಸ್‌ಎಫ್ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಅವರು, 'ಆಪರೇಷನ್ ಸಿಂದೂರ' ಸಮಯದಲ್ಲಿ ಗಡಿ ಭದ್ರತಾ ಪಡೆ-ಬಿಎಸ್‌ಎಫ್ ವಹಿಸಿದ ಪಾತ್ರ ಶ್ಲಾಘನೀಯ. ಆ ಸಂದರ್ಭದಲ್ಲಿ ಬಿಎಸ್‌ಎಫ್ ಗಡಿಯನ್ನು ದೃಢವಾಗಿ ಕಾಪಾಡಿದ್ದಲ್ಲದೆ, ಗಡಿ ಜಿಲ್ಲೆಗಳಲ್ಲಿ ವಾಸಿಸುವ ಜನರ ಮನೋಸ್ಥೈರ್ಯವನ್ನು ಹೆಚ್ಚಿಸಿದೆ ಎಂದು ಹೇಳಿದರು.

ಗಡಿ ಭದ್ರತೆಯನ್ನು ಸಂಪೂರ್ಣವಾಗಿ ಸುರಕ್ಷಿತಗೊಳಿಸಲು ಬಿಎಸ್‌ಎಫ್, ಸೇನೆ, ಆಡಳಿತ ಮತ್ತು ಜಾಗರೂಕ ನಾಗರಿಕರನ್ನು ಒಳಗೊಂಡ ನಾಲ್ಕು-ಕೋನಗಳ ಗ್ರಿಡ್ ಅನ್ನು ರಚಿಸುವ ಅಗತ್ಯವಿದೆ. ಈ ನಾಲ್ಕು-ಕೋನಗಳ ಗ್ರಿಡ್‌ನೊಂದಿಗೆ, ಗಡಿಯಲ್ಲಿನ ಬೆದರಿಕೆಗಳನ್ನು ಪೂರ್ಣ ಬಲದಿಂದ ಎದುರಿಸಬೇಕು ಎಂದು ಅವರು ಒತ್ತಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಡಿಯಲ್ಲಿ ದೇಶದ ಭದ್ರತಾ ವ್ಯವಸ್ಥೆ ಪ್ರಮುಖ ರೂಪಾಂತರಕ್ಕೆ ಒಳಗಾಗಿದೆ. ಸಶಸ್ತ್ರ ಪಡೆಗಳು ಮತ್ತು ಅರೆಸೇನಾ ಪಡೆಗಳನ್ನು ಆಧುನೀಕರಿಸಲಾಗಿದೆ. ಭಯೋತ್ಪಾದನೆಯ ವಿರುದ್ಧ ಕಠಿಣ ನಿಲುವನ್ನು ಕಾಯ್ದುಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಇದಕ್ಕೂ ಮೊದಲು, ಕೇಂದ್ರ ಗೃಹ ಸಚಿವರು, ಗಡಿ ಹೊರಠಾಣೆಗಳಲ್ಲಿ ಹೊಸದಾಗಿ ನಿರ್ಮಿಸಲಾದ ೧೪ ಮಹಿಳಾ ಬ್ಯಾರಕ್‌ಗಳನ್ನು ವರ್ಚುವಲ್ ಆಗಿ ಉದ್ಘಾಟಿಸಿದರು.

---

ರಾಷ್ಟ್ರಪತಿ ದ್ರೌಪದಿ ಮುರ್ಮು ಮೂರು ದಿನಗಳ ಭೇಟಿಗಾಗಿ ಇಂದು ಸಿಕ್ಕಿಂಗೆ ಆಗಮಿಸಿದರು.

ಅವರು ಆರ್ಕಿಡೇರಿಯಂ ಮತ್ತು ನಮ್ಗ್ಯಾಲ್ ಇನ್ಸ್ಟಿಟ್ಯೂಟ್ ಆಫ್ ಟಿಬೆಟಾಲಜಿಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ರಾಜ್ಯಪಾಲ ಓಂ ಪ್ರಕಾಶ್ ಮಾಥುರ್, ಮುಖ್ಯಮಂತ್ರಿ ಪ್ರೇಮ್ ಸಿಂಗ್ ತಮಾಂಗ್ ಉಪಸ್ಥಿತರಿದ್ದರು.

ಇದು ಆರ್ಕಿಡ್‌ಗಳನ್ನು ಬೆಳೆಸಲು ಮತ್ತು ಪ್ರದರ್ಶಿಸಲು ವಿನ್ಯಾಸಗೊಳಿಸಲಾದ ಹವಾಮಾನ-ನಿಯಂತ್ರಿತ ಹಸಿರುಮನೆಯಾಗಿದೆ. ರಾಷ್ಟ್ರಪತಿಗಳು ಆರ್ಕಿಡೇರಿಯಂನಲ್ಲಿ ರಾಜ್ಯದ ಶ್ರೀಮಂತ ಪರಿಸರ ಮತ್ತು ಹೂವಿನ ಪರಂಪರೆಯನ್ನು ವೀಕ್ಷಿಸಿದರು.

ನಾಳೆ ರಾಷ್ಟ್ರಪತಿಗಳು ನಾಥುಲಾ ಪಾಸ್‌ಗೆ ಭೇಟಿ ನೀಡಲಿದ್ದಾರೆ ಮತ್ತು ಸಿಕ್ಕಿಂ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿಯೂ ಭಾಗವಹಿಸಲಿದ್ದಾರೆ. ತಮ್ಮ ಭೇಟಿಯ ಕೊನೆಯ ದಿನದಂದು, ಅವರು ಸಿಕ್ಕಿಂ ಪೊಲೀಸರಿಗೆ ರಾಷ್ಟ್ರಪತಿಗಳ ಪೊಲೀಸ್ ಪದಕವನ್ನು ಪ್ರದಾನ ಮಾಡಲಿದ್ದಾರೆ.

---

ದೇಶದಲ್ಲಿ ಸ್ಥಿತಿಸ್ಥಾಪಕ, ವಿಶ್ವಾಸಾರ್ಹ ಮತ್ತು ಸುಸ್ಥಿರ ಅರೆವಾಹಕ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರ ಹಲವಾರು ಕಾರ್ಯತಂತ್ರದ ಉಪಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

ಸೆಮಿಕಾನ್ ಇಂಡಿಯಾ ಕಾರ್ಯಕ್ರಮದಡಿಯಲ್ಲಿ, ಇಲ್ಲಿಯವರೆಗೆ ೧೨ ಫ್ಯಾಬ್ರಿಕೇಶನ್ ಮತ್ತು ಪ್ಯಾಕೇಜಿಂಗ್ ಯೋಜನೆಗಳು ಹಾಗೂ ೨೪ ಅರೆವಾಹಕ ವಿನ್ಯಾಸ ಯೋಜನೆಗಳನ್ನು ಅನುಮೋದಿಸಲಾಗಿದೆ.

ಹೂಡಿಕೆದಾರರ ವಿಶ್ವಾಸವನ್ನು ಹೆಚ್ಚಿಸುವ ಮತ್ತು ಅವರ ಕಳವಳಗಳನ್ನು ಪರಿಹರಿಸುವ ದೃಷ್ಟಿಕೋನದೊಂದಿಗೆ, ಭಾರತ ಸೆಮಿಕಂಡಕ್ಟರ್ ಮಿಷನ್ "ಇನ್‌ವೆಸ್ಟರ್ಸ್ ಸಪೋರ್ಟ್" ಎಂಬ ಹೆಸರಿನ ಆನ್‌ಲೈನ್ ಪೋರ್ಟಲ್ ಅನ್ನು ಪ್ರಾರಂಭಿಸಿದೆ.

ಈ ಪೋರ್ಟಲ್, ಸರ್ಕಾರಿ ಯೋಜನೆಗಳು, ನೀತಿಗಳು, ಸೆಮಿಕಾನ್ ಇಂಡಿಯಾ ಕಾರ್ಯಕ್ರಮದ ಅಡಿಯಲ್ಲಿ ಅನುಮೋದಿತ ಯೋಜನೆಗಳು ಮತ್ತು ಭಾರತದಲ್ಲಿ ಹೂಡಿಕೆ ಮಾಡಲು ಯೋಜಿಸುತ್ತಿರುವ ಹೂಡಿಕೆದಾರರಿಗೆ ನಿಯಂತ್ರಕ ಅವಶ್ಯಕತೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಒದಗಿಸುತ್ತದೆ.

ಭಾರತ ಸೆಮಿಕಂಡಕ್ಟರ್ ಮಿಷನ್ ವೆಬ್‌ಸೈಟ್ ಮೂಲಕ ಪೋರ್ಟಲ್ ಅನ್ನು ಪ್ರವೇಶಿಸಬಹುದು.

---

ಹಿಮಾಚಲಪ್ರದೇಶದ ಧರ್ಮಶಾಲಾದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಮೊದಲನೇ ಕ್ವಾಲಿಫೈಯರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಗುಜರಾತ್ ಟೈಟಾನ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಈ ಪಂದ್ಯದಲ್ಲಿ ಗೆಲ್ಲುವ ತಂಡ ನೇರವಾಗಿ ಐಪಿಎಲ್ ಫೈನಲ್‌ಗೆ ಪ್ರವೇಶಿಸಲಿದ್ದು, ಸೋತ ತಂಡಕ್ಕೆ ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ಫೈನಲ್‌ಗೆ ಏರುವ ಮತ್ತೊಂದು ಅವಕಾಶ ಸಿಗಲಿದೆ.

ಇನ್ನು ನಾಳೆ ಪಂಜಾಬ್‌ನ ಮೊಹಾಲಿಯಲ್ಲಿ ನಡೆಯಲಿರುವ ಎಲಿಮಿನೇಟರ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯದಲ್ಲಿ ಸೋಲುವ ತಂಡ ಪಂದ್ಯಾವಳಿಯಿಂದ ಹೊರ ಬೀಳಲಿದ್ದು, ಗೆದ್ದ ತಂಡ ಎರಡನೇ ಕ್ವಾಲಿಫೈಯರ್‌ಗೆ ಮುನ್ನಡೆಯಲಿದೆ.

---

ಸಿಂಗಾಪುರ ಮುಕ್ತ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಪಿ.ವಿ.ಸಿಂಧು ಮತ್ತು ಪುರುಷರ ಡಬಲ್ಸ್ ವಿಭಾಗದಲ್ಲಿ ಸಾತ್ವಿಕ್ ಸಾಯಿರಾಜ್ ರಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಪ್ರೀ-ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ, ಪಿ.ವಿ.ಸಿಂಧು ಅವರು ಇಂಡೋನೇಷ್ಯಾದ ಪುತ್ರಿ ಕುಸುಮಾ ವರ್ದಾನಿ ಅವರನ್ನು ೨೧-೧೬, ೨೧-೧೮ ರ ನೇರ ಸೆಟ್‌ಗಳಿಂದ ಸೋಲಿಸಿ, ಸುಲಭವಾಗಿ ಪಂದ್ಯಾವಳಿಯ ಎರಡನೇ ಸುತ್ತಿಗೆ ಮುನ್ನಡೆದರು.

ಪುರುಷರ ಡಬಲ್ಸ್ ವಿಭಾಗದಲ್ಲಿ, ಭಾರತದ ಜೋಡಿಯು, ಅಮೆರಿಕದ ಪ್ರೀಸ್ಲಿ ಸ್ಮಿತ್ ಮತ್ತು ಚೆನ್ ಝಿ ಯಿ ಜೋಡಿ ವಿರುದ್ಧ ೨೬-೨೮, ೨೧-೧೫, ೨೧-೧೩ ರ ಸೆಟ್‌ಗಳ ಗೆಲುವು ದಾಖಲಿಸಿ, ಎರಡನೇ ಸುತ್ತಿನಲ್ಲಿ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಂಡರು.

---

ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ-ಕೆವಿಐಸಿ, ೨೦೨೫-೨೬ರ ಆರ್ಥಿಕ ವರ್ಷದಲ್ಲಿ ಒಂದು ಲಕ್ಷ ೮೬ ಸಾವಿರ ಕೋಟಿ ರೂಪಾಯಿಗಳ ವಹಿವಾಟು ದಾಖಲಿಸುವ ಮೂಲಕ ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕೆವಿಐಸಿ ಅಧ್ಯಕ್ಷ ಮನೋಜ್ ಕುಮಾರ್, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಮತ್ತು ಲಕ್ಷಾಂತರ ಗ್ರಾಮೀಣ ಕುಶಲಕರ್ಮಿಗಳ ಕಠಿಣ ಪರಿಶ್ರಮದಿಂದ ಈ ಮೈಲಿಗಲ್ಲು ಸಾಧಿಸಲಾಗಿದೆ ಎಂದು ಹೇಳಿದರು.

ಕೆವಿಐಸಿ, ಎರಡು ಕೋಟಿಗೂ ಹೆಚ್ಚು ಜನರಿಗೆ ಉದ್ಯೋಗ ಒದಗಿಸುತ್ತಿದೆ. ಅವರಲ್ಲಿ ಶೇಕಡಾ ೮೦ ರಷ್ಟು ಮಹಿಳೆಯರು ಇದ್ದಾರೆ. ೧೨ ವರ್ಷಗಳ ಹಿಂದೆ ಖಾದಿ ಉದ್ಯಮದ ವಹಿವಾಟು ಕೇವಲ ೩೦ ರಿಂದ ೩೨ ಸಾವಿರ ಕೋಟಿ ರೂಪಾಯಿಗಳಷ್ಟಿತ್ತು. ಪ್ರಸ್ತುತ ಒಂದು ಲಕ್ಷ ೮೬ ಸಾವಿರ ಕೋಟಿ ರೂಪಾಯಿಗಳ ವಹಿವಾಟು ದಾಖಲಾಗಿದೆ. ಖಾದಿ ಉತ್ಪನ್ನಗಳ ವ್ಯವಹಾರವನ್ನು ಮತ್ತಷ್ಟು ಹೆಚ್ಚಿಸಲು ಕೆವಿಐಸಿ ಶೀಘ್ರದಲ್ಲೇ ಇ-ಕಾಮರ್ಸ್ ವೇದಿಕೆಯನ್ನು ಪ್ರಾರಂಭಿಸಲಿದೆ ಎಂದು ಅವರು ಮಾಹಿತಿ ನೀಡಿದರು.

---

ಉಕ್ರೇನ್ ಮೇಲೆ ರಷ್ಯಾ ೧೦೦ ಕ್ಕೂ ಹೆಚ್ಚು ಡ್ರೋನ್‌ಗಳು ಮತ್ತು ಎರಡು ಬ್ಯಾಲಿಸ್ಟಿಕ್ ಕ್ಷಿಪಣಿಗಳಿಂದ ಕಳೆದ ರಾತ್ರಿ ದಾಳಿ ನಡೆಸಿದೆ ಎಂದು ಉಕ್ರೇನ್ ವಾಯುಪಡೆ ಇಂದು ತಿಳಿಸಿದೆ.

ರಾಜತಾಂತ್ರಿಕ ಅಧಿಕಾರಿಗಳು ಸೇರಿದಂತೆ ವಿದೇಶಿ ನಾಗರಿಕರು ಉಕ್ರೇನ್ ರಾಜಧಾನಿ ಕೀವ್ ಅನ್ನು ಸಾಧ್ಯವಾದಷ್ಟು ಬೇಗ ತೊರೆಯುವಂತೆ ರಷ್ಯಾ ಆಗ್ರಹಿಸಿದೆ.

---

ಮಾಜಿ ಉಪರಾಷ್ಟ್ರಪತಿ ಎಂ.ವೆಂಕಯ್ಯ ನಾಯ್ಡು ಮತ್ತು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ಇಂದು ನವದೆಹಲಿಯಲ್ಲಿ 'ಅಪ್ನಾಪನ್: ನರೇಂದ್ರ ಮೋದಿ ಸಂಗ್ ಮೇರೆ ಅನುಭವ್' ಎಂಬ ಶೀರ್ಷಿಕೆಯ ಪುಸ್ತಕವನ್ನು ಬಿಡುಗಡೆ ಮಾಡಿದರು. ಈ ಪುಸ್ತಕವನ್ನು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ರಚಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ವೆಂಕಯ್ಯ ನಾಯ್ಡು, ಪ್ರತಿಯೊಬ್ಬರೂ, ಅದರಲ್ಲೂ ವಿಶೇಷವಾಗಿ ಉದಯೋನ್ಮುಖ ರಾಜಕಾರಣಿಗಳು ಈ ಪುಸ್ತಕವನ್ನು ಓದಬೇಕು ಎಂದು ಮನವಿ ಮಾಡಿದರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮಾತನಾಡಿ, ಈ ಪುಸ್ತಕವು ಕೇವಲ ಒಂದು ಸಾಮಾನ್ಯ ರಾಜಕೀಯ ಜೀವನಚರಿತ್ರೆಯಲ್ಲ. ಬದಲಿಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಶಿವರಾಜ್ ಸಿಂಗ್ ಚೌಹಾಣ್ ಅವರು ಜನರ ಕಲ್ಯಾಣಕ್ಕಾಗಿ ಹೇಗೆ ಒಟ್ಟಾಗಿ ಶ್ರಮಿಸಿದರು ಎಂಬುದನ್ನು ಇದು ತೋರಿಸುತ್ತದೆ ಎಂದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಮನೋಹರ್ ಲಾಲ್, ಡಾ. ಮನ್ಸುಖ್ ಮಾಂಡವೀಯ, ಗಿರಿರಾಜ್ ಸಿಂಗ್, ಸಿ.ಆರ್.ಪಾಟೀಲ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಉಪಸ್ಥಿತರಿದ್ದರು.

________ ಮುಕ್ತಾಯ ________